# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)

## ವಾರ್ಡ್ ಸಮಿತಿ ಸಭೆ, ದಿನಾಂಕ:21-06-2022 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/05/22-23

ದಿನಾಂಕ: 21-06-2022 ರಂದು ಮಧ್ಯಾಹ್ನ 12.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri Nagaraj | Tax Inspector |
| 4. | Smt.Suguna | Tax Inspector |
| 5. | Sri Venkatesh | Horticulture Inspector |
| 6. | Sri Ragavendra | PSI D J Halli Police Station |
| 7. | Sri. Mallesh | BESCOM |
| 8. | Sri.Mahesh Kumar. M | Sanitary Dhafedhar |
| 9. | Sri Suresh | Ward Committee Member |
| 10. | Sri Syed Ansar Pasha | Ward Committee Member |
| 11. | Sri Gopinath | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 06-06-2022 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ವಾರ್ಡ್ 47, ಡಿ.ಜೆ.ಹಳ್ಳಿ ವಾರ್ಡ್ ಸದಸ್ಯರಾದ ಶ್ರೀ.ಕೆ.ಗೋಪಿನಾಥ್ ರವರು ಸುಜ್ಜನನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಿದ್ದು, ಇದನ್ನು ಸರಿಪಡಿಸಲು ದೂರವಾಣಿ ಮುಖಾಂತರ ಶ್ರೀ.ರಾಹುಲ್ ಸಹಾಯಕ ಅಭಿಯಂತರರು, BWSSB ರವರಿಗೆ ಸೂಚಿಸಲಾಯಿತು.
2. ವಾರ್ಡ್ 47 ರ ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ಬರುವ ಮೋದಿ ಮುಖ್ಯರಸ್ತೆ ಹಾಗೂ ಪುಟ್‌ಪಾತ್‌ನಲ್ಲಿ ವ್ಯಾಪಾರ ಮಾಡುತ್ತಿದ್ದು, ಇದರಿಂದ ಅಕ್ಕಪಕ್ಕದ ಮತ್ತು ಮುಖ್ಯವಾಗಿ ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಉಂಟಾಗಿದ್ದು, ಇದನ್ನು ತೆರವುಗೊಳಸಲು ದಿನಾಂಕ ಗೊತ್ತುಪಡಿಸಿ ಟ್ರಾಫಿಕ್ ಪೋಲೀಸ್, ಸ್ಥಳೀಯ ಪೋಲೀಸ್, ಆರೋಗ್ಯ ಪರಿವೀಕ್ಷಕರು ಹಾಗೂ ಮಾರ್ಷಲ್‌ಗಳೊಂದಿಗೆ ಅಗತ್ಯ ಕ್ರಮ ವಹಿಸಲು ತೀರ್ಮಾನಿಸಿ ಸಹಾಯಕ ಅಭಿಯಂತರರಿಗೆ ತಿಳಿಸಲಾಯಿತು
3. ವಾರ್ಡ್ 47 ರ ಡಿ.ಜೆ.ಹಳ್ಳಿ ವ್ಯಾಪ್ತಿಗೆ ಒಳಪಡುವ ಮೋದಿ ಗಾರ್ಡನ್ 6ನೇ ಕ್ರಾಸ್‌ನಲ್ಲಿ ಪಕ್ಕದ ಚರಂಡಿಯನ್ನು ಸುಮಾರು 100 ಮೀಟರ್ ಒಳಗೆ ಹೊಸದಾಗಿ ಚರಂಡಿಯನ್ನು ನಿರ್ಮಿಸಲು ಕಂಡುಬಂದಿದ್ದು, ಅದರಂತೆ ಮುಂದಿನ ಪ್ರಸ್ತಾವನೆಯಲ್ಲಿ ಅಗತ್ಯಕ್ರಮ ಕೈಗೊಳ್ಳಲು ಸೂಚಿಸಲಾಯಿತು.
4. ಮುಂದಿನ ವಾರ್ಡ್ ಕಮಿಟಿ ನಡವಳಿಯಲ್ಲಿ ಹಾಜರಾಗುವ ಸದಸ್ಯರು ಯಾವುದೇ ನೊಂದಾಯಿತ ಇತರೇ ಸಂಘ ಸಂಸ್ಥೆಗಳನ್ನು ನಡುವಳಿಯಲ್ಲಿ ಸೇರಿಸಲು ಪ್ರಸ್ತಾಪಿಸಲಾಯಿತು.

ಸಹಿ

(ಎಸ್.ವಿಶ್ವನಾಥ)

ಅಧ್ಯಕ್ಷರು (ನೋಡಲ್ ಅಧಿಕಾರಿ)

ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

Scanned with CamScanner

ಪ್ರತಿಯನ್ನು:

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
21ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ವಾರ್ಡ್ ವ್ಯಾಪ್ತಿಯ ಎಲ್ಲಾ ವೇಲ್‌ಫೇರ್ ಅಸೋಷಿಯನ್ಸ್ ರವರಿಗೆ.
11. ಕಛೇರಿ ಕಡತಕ್ಕೆ.

Scanned with CamScanner